**ಓ.ಎಸ್. ನಂ. 128/2023** **ಪಿ.ಡಬ್ಲ್ಯೂ- 1**

**ಸಾಕ್ಷಿಯನ್ನು ದಿನಾಂಕ 17.8.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಅಂಶಗಳು ಸತ್ಯವಾಗಿದ್ದು, ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ನಾನು ಹಲವು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡಿ ಗುರುತಿಸುತ್ತಿದ್ದೇನೆ. 06 ಕೈಬರಹದ ಪಹಣಿಗಳ ದೃಢೀಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 1 ರಿಂದ 6 ಎಂದು, 05 ಗಣಕೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 7 ರಿಂದ 11 ಎಂದು, ಒಂದು ವಂಶವೃಕ್ಷದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ 12 ಎಂದು, ಒಂದು ಮುಟೇಶನ್ ರಿಜಿಸ್ಟರ್ ಅನ್ನು ಹಾಜರುಪಡಿಸಿದ್ದು ನಿಪಿ 13 ಎಂದು, ದಿನಾಂಕಃ 17.06.2023 ರಂದು ಪ್ರತಿವಾದಿಗಳಿಗೆ ವಕೀಲರ ಮೂಲಕ ನೀಡಿರುವ ನೋಟಿಸಿನ ಕಚೇರಿಯ ಪ್ರತಿಯನ್ನು ನಿಪಿ 14 ಎಂದು, 04 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು ನಿಪಿ 15 ರಿಂದ 18 ಎಂದು, ಸದರಿ ನೋಟಿಸು ಪ್ರತಿವಾದಿಗಳಿಗೆ ಜಾರಿಯಾಗದೇ ವಾಪಸ್ಸು ಬಂದಿದ್ದು 03 ಅಂಚೆ ಕವರುಗಳನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಲಾಯಿತು. ಅಂಚೆ ಕವರುಗಳನ್ನು ನಿಪಿ 19 ರಿಂದ 21 ಎಂದು ಅದರಲ್ಲಿರುವ ನೋಟಿಸ್ ನ ಪ್ರತಿಯನ್ನು ಕ್ರಮವಾಗಿ ನಿಪಿ 19(ಎ) ಯಿಂದ 21(ಎ) ಎಂದು ಗುರುತಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

(ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸಾ.ಸ.ಇ.ಒ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್ ಸಿ
ಹೆಚ್.ಡಿ.ಕೋಟೆ